## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 346 (512) |
| ಸದಸ್ಯರ ಹೆಸರು | : ಗೋವಿಂದ ರಾಜು(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 10.07.2023 |
| ಉತ್ತರಿಸಬೇಕಾದ ಸಚಿವರು | : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯಾದ್ಯಂತ ಕಳೆದ ಐದು ವರ್ಷದಲ್ಲಿ ಶಾಲೆ ತೊರೆದ ವಿದ್ಯಾರ್ಥಿಗಳ ಪ್ರಮಾಣ ಎಷ್ಟು;</td><td>ರಾಜ್ಯಾದ್ಯಂತ ಕಳೆದ ಐದು ವರ್ಷದಲ್ಲಿ ಶಾಲೆ ತೊರೆದ ವಿದ್ಯಾರ್ಥಿಗಳ ವಿವರ ಈ ಕೆಳಕಂಡಂತಿದೆ.
<table>
<tr><th>ವರ್ಷ</th><th>ಶಾಲೆಯಿಂದ ಹೊರಗುಳಿದ ಮಕ್ಕಳ ಸಂಖ್ಯೆ</th></tr>
<tr><td>2018-19</td><td>7605</td></tr>
<tr><td>2019-20</td><td>17298</td></tr>
<tr><td>2020-21</td><td>8476</td></tr>
<tr><td>2021-22</td><td>18461</td></tr>
<tr><td>2022-23</td><td>5945</td></tr>
</table></td></tr>
<tr><td>ಆ)</td><td>ಶಾಲೆ ತೊರೆದಿರುವ ವಿದ್ಯಾರ್ಥಿಗಳ ಸಂಖ್ಯೆ ದೇಶದಲ್ಲೇ ರಾಜ್ಯ 7ನೇ ಸ್ಥಾನ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ:</td><td>ಬಂದಿದೆ.<br>ಶಾಲೆ ತೊರೆದ 16 ರಿಂದ 18ನೇ ವಯೋಮಾನದ ವಿದ್ಯಾರ್ಥಿಗಳ ಸಂಖ್ಯೆ ದೇಶದಲ್ಲೇ ರಾಜ್ಯ 7 ನೇ ಸ್ಥಾನ ಪಡೆದಿರುತ್ತದೆ. 10 ನೇ ತರಗತಿ ಮುಗಿದ ನಂತರ ವಿದ್ಯಾರ್ಥಿಗಳು ITI, ಡಿಪ್ಲೊಮಾ ಮತ್ತು ಪಾಲಿಟೆಕ್ನಿಕ್ ಕೋರ್ಸ್‌ಗಳು, NTTF, ನರ್ಸಿಂಗ್, GTTC, PMKKY ಮತ್ತು CMKKY ನಂತಹ ವೃತ್ತಿಪರ ಕೋರ್ಸ್‌ಗಳನ್ನು ತೆಗೆದುಕೊಳ್ಳುವಂತಹ ವಿವಿಧ ಕಾರಣಗಳಿಂದಾಗಿ ಕರ್ನಾಟಕದಲ್ಲಿ ಮಾಧ್ಯಮಿಕ ಹಂತ ಮತ್ತು ಹೈಯರ್ ಸೆಕೆಂಡರಿ ಹಂತಗಳಲ್ಲಿ ಡ್ರಾಪ್‌ಔಟ್ ಪ್ರಮಾಣ ಹೆಚ್ಚಾಗಿದೆ. 10 ನೇ ತರಗತಿಯಲ್ಲಿ ತೇರ್ಗಡೆಯಾದ ಎಲ್ಲಾ ವಿದ್ಯಾರ್ಥಿಗಳು 11ನೇ (PUC) ತರಗತಿಗೆ ದಾಖಲಾಗದೆ ಇತರ ಮೇಲ್ಕಂಡ ಕೋರ್ಸ್‌ಗಳಿಗೆ ದಾಖಲಾತಿಯನ್ನು ಪಡೆದಿರುತ್ತಾರೆ. ಈ ಎಲ್ಲಾ ವಿದ್ಯಾರ್ಥಿಗಳ ಮಾಹಿತಿಯನ್ನು ಪತ್ತೆ ಮಾಡುವ ಮೂಲಕ 11 ನೇ ತರಗತಿಗೆ ಸೇರಿದ ಮತ್ತು ಇತರ ವೃತ್ತಿಪರ ಕೋರ್ಸ್‌ಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳನ್ನು ಪತ್ತೆಹಚ್ಚಲು ಕ್ರಮಕೈಗೊಳ್ಳಲಾಗಿದೆ.</td></tr>
</table>

| | | |
|---|---|---|
| ಇ) | ಮಕ್ಕಳು ಶಾಲೆ ತೊರೆಯದಂತೆ ನೋಡಿಕೊಳ್ಳುವ ಜವಾಬ್ದಾರಿ ಯಾವ ಅಧಿಕಾರಿಗಳಿಗಿದೆ: ಸಮಗ್ರ ಶಿಕ್ಷಣ ಯೋಜನೆಯಡಿಯಲ್ಲಿ ಇದನ್ನು ತಡೆಗಟ್ಟಲು ಕಳೆದ ಐದು ವರ್ಷದಲ್ಲಿ ಎಷ್ಟು ಅನುದಾನವನ್ನು ಸರ್ಕಾರ ಬಿಡುಗಡೆ ಮಾಡಿದೆ: | ಮಕ್ಕಳು ಶಾಲೆ ತೊರೆಯದಂತೆ ನೋಡಿಕೊಳ್ಳುವ ಜವಾಬ್ದಾರಿ ಶಾಲಾ ಹಂತದಲ್ಲಿ ಮುಖ್ಯ ಶಿಕ್ಷಕರು, ಕ್ಲಸ್ಟರ್ ಹಂತದಲ್ಲಿ ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿ, ಹೋಬಳಿ ಮಟ್ಟದಲ್ಲಿ ಶಿಕ್ಷಣ ಸಂಯೋಜನಾಧಿಕಾರಿಗಳು (ಹಾಜರಾತಿ ಪ್ರಾಧಿಕಾರಿ), ತಾಲ್ಲೂಕು ಹಂತದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು/ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳು ಹಾಗೂ ಜಿಲ್ಲಾ ಹಂತದಲ್ಲಿ ಉಪ ನಿರ್ದೇಶಕರು (ಆಡಳಿತ)/ ಜಿಲ್ಲಾ ಉಪಯೋಜನಾ ಸಮನ್ವಯಾಧಿಕಾರಿಗಳು ಇವರ ಜವಾಬ್ದಾರಿಯಾಗಿರುತ್ತದೆ.<br>ಕಳೆದ ಐದು ವರ್ಷಗಳಲ್ಲಿ ಬಿಡುಗಡೆಯಾಗಿರುವ ಅನುದಾನದ ವಿವರ ಈ ಕೆಳಕಂಡಂತಿದೆ. |

| ವರ್ಷ | ಬಿಡುಗಡೆಯಾದ ಹಣ (ರೂ.ಲಕ್ಷಗಳಲ್ಲಿ) |
|---|---|
| 2018-19 | 688.99 |
| 2019-20 | 149.29 |
| 2020-21 | 42.33 |
| 2021-22 | 208.08 |
| 2022-23 | 10.94 |

| | | |
|---|---|---|
| ಈ) | ಬಿಡುಗಡೆ ಮಾಡಿದ್ದಲ್ಲಿ, ಇಷ್ಟು ಪ್ರಮಾಣದಲ್ಲಿ ಡ್ರಾಪ್ ಔಟ್ ಆಗಲು ಕಾರಣಗಳನ್ನು ಸರ್ಕಾರದ ಅಧಿಕಾರಿಗಳು ಪತ್ತೆ ಹಚ್ಚಿದ್ದಾರೆಯೇ: | ಡ್ರಾಪ್ ಔಟ್ ಆಗಲು ಈ ಕೆಳಕಂಡ ಅಂಶಗಳು ಕಾರಣಗಳಾಗಿವೆ.<br>1. ವಲಸೆ ಜೀವನ (Migration)<br>2. ಕೌಟುಂಬಿಕ ಸಮಸ್ಯೆ (Family dispute)<br>3. ಮಕ್ಕಳ ಅನಾರೋಗ್ಯ (Ill health)<br>4. ಹೆಣ್ಣು ಮಕ್ಕಳಿಗೆ ಸಂಬಂಧಿಸಿದ ಕಾರಣ (Reasons related to girl child)<br>5. ಹೆಣ್ಣು ಮಗು ಪ್ರೌಢಾವಸ್ಥೆಗೆ ಬರುವುದು (Puberty)<br>6. ಅಲೆಮಾರಿ (Nomads)<br>7. ತೀವ್ರ ಅಂಗವಿಕಲತೆ (Severe physical disability)<br>8. ಬುಡಕಟ್ಟು ಜನಾಂಗದ ಮಕ್ಕಳು (Tribal Children)<br>9. ಅನಾಥ ಮಗು (Orphan child)<br>10. ಬೀದಿಮಗು /ಚಿಂದಿ ಆಯುವ ಮಗು (Street/Rag picking child) |

| | | |
|---|---|---|
| ಉ) | ಕೋವಿಡ್ ನಂತರ ಪೂರ್ಣ ಪ್ರಮಾಣದಲ್ಲಿ ಶಾಲೆಗಳು ಪ್ರಾರಂಭವಾದಾಗ ಈ ಮಕ್ಕಳನ್ನು ಶಾಲೆಗೆ ಕರೆತರಲು ನಿರ್ದಿಷ್ಟವಾದ ಯೋಜನೆಯನ್ನು ರೂಪಿಸಬೇಕಾಗಿದ್ದು ಸರ್ಕಾರ ಇದರಿಂದ ವಿಫಲವಾಗಿದೆಯೇ: ಹಾಗಿದ್ದಲ್ಲಿ ಕಾರಣಗಳೇನು? | ಆದೇಶ ಸಂಖ್ಯೆ:ಇಡಿ 05 ಮಾಹಿತಿ 2019, ದಿನಾಂಕ: 09.12.2019ರ **"ವಲಸಿಗ ಮಕ್ಕಳ ಹಾಗೂ ವಲಸಿಗ ಕೂಲಿಕಾರರ ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆಯ ನೀತಿ – 2019"** ನ್ನು ಅನುಷ್ಠಾನಗೊಳಿಸಿದೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಾರ್ಮಿಕ ಇಲಾಖೆ, ಕಂದಾಯ ಇಲಾಖೆ ಮತ್ತು ಆರೋಗ್ಯ ಇಲಾಖೆಗಳ ಸಹಭಾಗಿತ್ವದೊಂದಿಗೆ ವಲಸೆ ಮಕ್ಕಳನ್ನು ಪತ್ತೆ ಹಚ್ಚಿ ಶಿಕ್ಷಣ ಮುಖ್ಯವಾಹಿನಿಗೆ ತರಲು ಕಾರ್ಯತಂತ್ರಗಳನ್ನು ರೂಪಿಸಲಾಗಿದೆ.<br><br>ವಲಸೆ ಮಕ್ಕಳನ್ನು ಶಿಕ್ಷಣ ಮುಖ್ಯವಾಹಿನಿಗೆ ತರಲು ದುರ್ಬಲ ಮತ್ತು ಅವಕಾಶ ವಂಚಿತ ಮಕ್ಕಳಿಗೆ ಹಾಗೂ ವಲಸಿತ ಮಕ್ಕಳಿಗೆ ನೇತಾಜಿ ಸುಭಾಷ್ ಚಂದ್ರ ಬೋಸ್ ವಸತಿ ಶಾಲೆ, ಕಸ್ತೂರ ಬಾ ಗಾಂಧಿ ಬಾಲಿಕಾ ವಸತಿ ನಿಲಯ, ಕರ್ನಾಟಕ ಕಸ್ತೂರ ಬಾ ಗಾಂಧಿ ವಸತಿ ಶಾಲೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಇಲಾಖೆಗಳ ವಸತಿ ನಿಲಯಗಳಲ್ಲಿ ದಾಖಲಾತಿಗೆ ಅವಕಾಶ ಕಲ್ಪಿಸಲಾಗುತ್ತಿದೆ. |

ಸಂಖ್ಯೆ: ಇಪಿ 199 ಪಿಜಿಸಿ 2023

**(ಎಸ್. ಮಧು ಬಂಗಾರಪ್ಪ)**
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.